ಕರ್ನಾಟಕ ಸರ್ಕಾರ

ಸಂಖ್ಯೆ: ಎಫ್ ಡಿ-ಸಿಎಎಂ/1/2025

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ.
ಬೆಂಗಳೂರು, ದಿನಾಂಕ:18.07.2025.

ಇವರಿಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಆರ್ಥಿಕ ಇಲಾಖೆ, ವಿಧಾನ ಸೌಧ
ಬೆಂಗಳೂರು.

ಇವರಿಗೆ,

1. ಅಧ್ಯಕ್ಷರು, ಕರ್ನಾಟಕ ರಾಜ್ಯ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
2. ಅಧ್ಯಕ್ಷರು, ಕರ್ನಾಟಕ ಸರ್ಕಾರ ಸಚಿವಾಲಯ ನೌಕರರ ಸಂಘ, ಬಹುಮಹಡಿ ಕಟ್ಟಡ, ಬೆಂಗಳೂರು.

ಮಾನ್ಯರೇ,

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ★ ಬೆಂಗಳೂರು ★

**ವಿಷಯ:** ಸರ್ಕಾರದಿಂದ ನೇರವಾಗಿ / ಪರೋಕ್ಷವಾಗಿ ನೇಮಕಗೊಂಡಿರುವ ಎಲ್ಲಾ ಅರ್ಹ ಅಧಿಕಾರಿ/ ನೌಕರರು ಕಡ್ಡಾಯವಾಗಿ ಸಂಬಳ ಪ್ಯಾಕೇಜಿನಲ್ಲಿ ನೋಂದಾಯಿಸಿಕೊಳ್ಳುವುದನ್ನು ಖಚಿತಪಡಿಸಿಕೊಳ್ಳುವ ಬಗ್ಗೆ.

**ಉಲ್ಲೇಖ:** ಇದೇ ಸಮ ಸಂಖ್ಯೆಯ ಪತ್ರ ದಿನಾಂಕ :27.02.2025.

******

ಸರ್ಕಾರದ ಇಲಾಖೆಗಳಲ್ಲಿ ನೇರವಾಗಿ/ಪರೋಕ್ಷವಾಗಿ ಇರುವ ವಿವಿಧ ಉದ್ಯೋಗಿಗಳಿಗೆ ಸಾಮಾಜಿಕ ಭದ್ರತಾ ಜಾಲವನ್ನು ಜಾರಿಗೆ ತರಲು ಅಥವಾ ಹೆಚ್ಚಿಸಲು ಉದ್ದೇಶಿಸಿರುವ ಸರ್ಕಾರಿ ಆದೇಶ ಸಂಖ್ಯೆ ಎಫ್‌ಡಿ-ಸಿಎಎಂ/1/2025, ದಿನಾಂಕ: 21.02.2025 ರ ಬಗ್ಗೆ ತಮ್ಮ ಗಮನವನ್ನು ಸೆಳೆಯಲಾಗಿದೆ.

ಮೇಲಿನ ಸರ್ಕಾರಿ ಆದೇಶದ ಉದ್ದೇಶವೆಂದರೆ ವಿವಿಧ ಬ್ಯಾಂಕುಗಳು ತಮ್ಮ ಸಂಬಳ ಪ್ಯಾಕೇಜುಗಳಲ್ಲಿ ಉಚಿತವಾಗಿ ಅಥವಾ ನಾಮಮಾತ್ರ ವೆಚ್ಚದಲ್ಲಿ ನೀಡುವ ಅಪಘಾತ/ಅವಧಿ ವಿಮಾ ರಕ್ಷಣೆ ಮತ್ತು ಇತರ ಪ್ರಯೋಜನಗಳನ್ನು ಅಧಿಕಾರಿ/ನೌಕರರು ಪಡೆದು, ತಮ್ಮ ಅವಲಂಬಿತ ಕುಟುಂಬಗಳನ್ನು ಸುರಕ್ಷಿತಗೊಳಿಸುವುದು. ಅಲ್ಲದೆ, ಸಂಬಂಧಪಟ್ಟ ಅಧಿಕಾರಿ/ನೌಕರರು ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ (PMSBY) ಮತ್ತು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ (PMJJBY) ಯೋಜನೆಗಳಡಿ ಹೆಚ್ಚಿನ ವಿಮಾ ರಕ್ಷಣೆಗಾಗಿ ನೋಂದಾವಣಿ ಮಾಡಿಕೊಳ್ಳಲು ಪ್ರೇರೇಪಿಸುವುದು. ಅದಲ್ಲದೆ ಹೆಚ್ಚುವರಿ/ನಾಮಮಾತ್ರ ಪ್ರೀಮಿಯಂ ಪಾವತಿಸುವ ಮೂಲಕ, ಹೆಚ್ಚಿನ ವಿಮಾ ರಕ್ಷಣೆಗಾಗಿ ಬ್ಯಾಂಕುಗಳು ನೀಡುತ್ತಿರುವ ವೈಯಕ್ತಿಕ ಅಪಘಾತ ವಿಮೆಯನ್ನು ಪಡೆಯಲು ಪ್ರೋತ್ಸಾಹಿಸುವುದು.

ಆದ್ದರಿಂದ, ಸರ್ಕಾರಿ ಆದೇಶದ ಹೊರಡಿಸಿದ **ಮೂರು ತಿಂಗಳಲ್ಲಿ** ಎಲ್ಲಾ ಅಧಿಕಾರಿ/ನೌಕರರು ಮತ್ತು ವಿವಿಧ ನಿಗಮಗಳು/ಮಂಡಳಿಗಳ ಉದ್ಯೋಗಿಗಳು ತಮ್ಮ ಕುಟುಂಬಗಳ ಹಿತದೃಷ್ಟಿಯಿಂದ ತಮ್ಮ ಆಯ್ಕೆಯ ಯಾವುದೇ ಬ್ಯಾಂಕ್ ನೀಡುವ ಸಂಬಳ ಪ್ಯಾಕೇಜ್‌ಗಳನ್ನು ಸ್ವಯಂಪ್ರೇರಿತವಾಗಿ ಆಯ್ಕೆ ಮಾಡಲು ಹೆಚ್ಚಿನ ಆಸಕ್ತಿಯಿಂದ ಮನವೊಲಿಸುವುದು ಮತ್ತು ಸಂಬಂಧಪಟ್ಟ ಬ್ಯಾಂಕಿಗೆ ಸಂಬಳ ಪ್ಯಾಕೇಜುಗಳಲ್ಲಿ ಸೇರಿಸಲು ಅರ್ಜಿಯನ್ನು ಸಲ್ಲಿಸಲು ತಮ್ಮನ್ನು ಮತ್ತು ಎಲ್ಲಾ ಅಧಿಕಾರಿ/ನೌಕರರನ್ನು ಪ್ರೇರೇಪಿಸಲು ಸೂಕ್ತ ಕ್ರಮ ಕೈಗೊಳ್ಳಲು ಎಲ್ಲಾ ಇಲಾಖಾ ಮುಖ್ಯಸ್ಥರನ್ನು ಕೋರಲಾಗಿತ್ತು.

ಸರ್ಕಾರಿ ಆದೇಶ ಹೊರಡಿಸಿ 4½ ತಿಂಗಳಾದರೂ ಸಂಬಳ ಪ್ಯಾಕೇಜಿನಲ್ಲಿ ನೋಂದಾಯಿಸಿಕೊಂಡ ಅಧಿಕಾರಿಗಳು/ನೌಕರರ ಸಂಖ್ಯೆ 3 ಲಕ್ಷಗಳಿಗೆ ಮಾತ್ರ ತಲುಪಿದೆಯೆಂದು ಹಾಗೂ ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ (PMSBY) ಯಡಿ 32,611 ಮತ್ತು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ (PMJJBY) ಯಡಿ 25,386 ನೋಂದಣಿಗಳು ಮಾತ್ರ ಹೆಚ್.ಆರ್.ಎಂ.ಎಸ್ ನಲ್ಲಿ ದಾಖಲಾಗಿದ್ದು, ಯೋಜನೆಗಳಡಿ ಹೆಚ್ಚಿನ ಪ್ರಗತಿಯಾಗಿರುವುದಿಲ್ಲವೆಂದು ತಿಳಿದು ಬಂದಿದೆ.

ಸರ್ಕಾರಿ ಆದೇಶದಲ್ಲಿ ವಿವರಿಸಿದಂತೆ ಎಲ್ಲಾ ಅರ್ಹ ಅಧಿಕಾರಿ/ನೌಕರರು ಕಡ್ಡಾಯವಾಗಿ ಸಂಬಳ ಪ್ಯಾಕೇಜಿನಲ್ಲಿ ನೋಂದಾಯಿಸಿಕೊಳ್ಳುವುದನ್ನು ಖಚಿತಪಡಿಸಿಕೊಳ್ಳಲು ಈ ಕೆಳಗೆ ಸೂಚಿಸಿದಂತೆ ಸಂಬಳ ಪ್ಯಾಕೇಜುಗಳಲ್ಲಿ ನೋಂದಾಯಿಸಿಕೊಳ್ಳದ ಅಧಿಕಾರಿಗಳ ಸಂಬಳದ ವಿತರಣೆಯನ್ನು ತಡೆಹಿಡಿಯಲು ಕ್ರಮ ಕೈಗೊಳ್ಳಲು ಸರ್ಕಾರವು ಯೋಚಿಸಿದೆ:

| ಗುಂಪು | ಯಾವ ಅವಧಿಯೊಳಗೆ ಸಂಬಳ ಪ್ಯಾಕೇಜಿನಲ್ಲಿ ನೋಂದಾಯಿಸಿಕೊಳ್ಳಲು ಸೂಚಿಸಿದ ಕಡೆಯ ದಿನಾಂಕ |
|---|---|
| ಎ ಗುಂಪಿನ ಅಧಿಕಾರಿಗಳು | 31.08.2025ರ ಒಳಗೆ |
| ಬಿ ಗುಂಪಿನ ಅಧಿಕಾರಿಗಳು | 30.09. 2025ರ ಒಳಗೆ |
| ಸಿ ಗುಂಪಿನ ಅಧಿಕಾರಿಗಳು | 30.11. 2025ರ ಒಳಗೆ |
| ಡಿ ಗುಂಪಿನ ಅಧಿಕಾರಿಗಳು | 31.01. 2026ರ ಒಳಗೆ |

ಈ ಹಿನ್ನಲೆಯಲ್ಲಿ ತಮ್ಮ ಸಂಘ ಮತ್ತು ತಮ್ಮ ಅಧೀನದಲ್ಲಿ ಬರುವ ಎಲ್ಲಾ ಸಂಘಗಳ ಸಂಬಂಧಪಟ್ಟ ಅಧಿಕಾರಿ/ನೌಕರ ಸದಸ್ಯರನ್ನು ಕಡ್ಡಾಯವಾಗಿ ಸಂಬಳ ಪ್ಯಾಕೇಜಿನಲ್ಲಿ ನೋಂದಾಯಿಸಿಕೊಳ್ಳುವುದನ್ನು ಆದ್ಯತೆಯ ಮೇಲೆ ಪ್ರೇರೇಪಿಸಲು ಕೋರಲಾಗಿದೆ.

ತಮ್ಮ ನಂಬುಗೆಯ,

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ★ ಬೆಂಗಳೂರು ★

(ಡಾ. ವಿಶಾಲ್ ಆರ್)
ಸರ್ಕಾರದ ಕಾರ್ಯದರ್ಶಿ,
(ವಿತ್ತೀಯ ಸುಧಾರಣೆ),
ಆರ್ಥಿಕ ಇಲಾಖೆ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು
3. ಯೋಜನಾ ನಿರ್ದೇಶಕರು,ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ-2, 5ನೇ ಮಹಡಿ, ಕೆಪಿಸಿಎಲ್ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ(ವಿತ್ತೀಯ ಸುಧಾರಣೆ), ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.